# National
# Kannada
# 28.12.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಸಕಲ ಸರ್ಕಾರಿ ಗೌರವಗಳೊಂದಿಗೆ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಪಾರ್ಥೀವ ಶರೀರದ ಅಂತ್ಯಕ್ರಿಯೆ; ಗಣ್ಯರು ಭಾಗಿ

೨. ಜಂಟಿ ಸೇನಾ ಸಮರಾಭ್ಯಾಸದಲ್ಲಿ ಪಾಲ್ಗೊಳ್ಳಲು ನೇಪಾಳಕ್ಕೆ ತೆರಳಿದ ಭಾರತೀಯ ಸೇನಾ ತುಕಡಿ

೩. ದೇಶವಾಸಿಗಳನ್ನುದ್ದೇಶಿಸಿ ಆಕಾಶವಾಣಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ’ಮನದ ಮಾತು’

೪. ಮೆಲ್ಬೋರ್ನ್ ಟೆಸ್ಟ್; ನಿತೀಶ್ ಕುಮಾರ್ ರೆಡ್ಡಿ ಶತಕ; ಫಾಲೊಆನ್ ನಿಂದ ಪಾರಾದ ಭಾರತ ತಂಡ

<><*<><>*><>

ಗುರುವಾರ ನಿಧನರಾದ ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಪಾರ್ಥೀವ ಶರೀರದ ಅಂತ್ಯಕ್ರಿಯೆ ಇಂದು ನವದೆಹಲಿಯ ನಿಗಮ್ ಬೋಧ ಘಾಟ್‌ನಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು. ಇದಕ್ಕೂ ಮೊದಲು ಮೋತಿಲಾಲ್ ಮಾರ್ಗದಲ್ಲಿರುವ ಮನಮೋಹನ್ ಸಿಂಗ್ ಅವರ ನಿವಾಸದಿಂದ ಪಾರ್ಥೀವ ಶರೀರವನ್ನು ಬಿಗಿಭದ್ರತೆಯಲ್ಲಿ ಎಐಸಿಸಿ ಕೇಂದ್ರ ಕಚೇರಿಗೆ ತರಲಾಯಿತು. ಸಿಖ್ ಸಮುದಾಯದ ಧಾರ್ಮಿಕ ಮುಖಂಡರು ಮತ್ತು ಡಾ.ಮನಮೋಹನ್ ಸಿಂಗ್ ಅವರ ಕುಟುಂಬ ಸದಸ್ಯರು ಅಂತಿಮ ವಿಧಿವಿಧಾನ ನೆರವೇರಿಸಿದರು. ಈ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ರಾಜನಾಥ್ ಸಿಂಗ್, ಅಮಿತ್ ಶಾ, ಜೆ.ಪಿ.ನಡ್ಡಾ, ಲೋಕಸಭೆ ಸ್ಪೀಕರ್ ಓಂ ಬಿರ್ಲಾ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಕ್ಷದ ಹಿರಿಯ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ, ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್, ಭೂತಾನ್ ದೊರೆ ಜಿಗ್ಮೆ ಖೇಸರ್ ನಾಮ್ಗ್ಯೆಲ್ ವಾಂಗ್‌ಚುಕ್ ಮತ್ತು ಮಾರಿಷಸ್‌ನ ವಿದೇಶಾಂಗ ಸಚಿವ ಧನಂಜಯ್ ರಾಮ್‌ಫುಲ್ ಸೇರಿದಂತೆ ಹಲವು ಗಣ್ಯರು ಅಗಲಿದ ನಾಯಕನಿಗೆ ಅಂತಿಮ ಶ್ರದ್ಧಾಂಜಲಿ ಸಲ್ಲಿಸಿದರು. ಪಂಜಾಬ್‌ನ ಅಮೃತ್‌ಸರದ ಹಿಂದೂ ಕಾಲೇಜಿನಲ್ಲೂ ಅಗಲಿದ ನಾಯಕನಿಗೆ ಅಂತಿಮ ಗೌರವ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಅಧ್ಯಾಪಕರು, ವಿದ್ಯಾರ್ಥಿಗಳು ರಾಜಕೀಯ ನಾಯಕರು ಭಾಗಿಯಾಗಿದ್ದರು. ಡಾ.ಮನಮೋಹನ್ ಸಿಂಗ್ ೧೯೫೧ ರಿಂದ ೧೯೫೩ ರ ಅವಧಿಯಲ್ಲಿ ಇದೇ ಕಾಲೇಜಿನಲ್ಲಿ ಬಿ.ಎ ಆನರ್ಸ್ ಪದವಿ ಪಡೆದಿದ್ದರು.

<><*<><>*><>

ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಹೆಸರಿನಲ್ಲಿ ಸ್ಮಾರಕ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅಗತ್ಯ ನಿವೇಶನ ಒದಗಿಸಲಿದೆ. ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ನಿರ್ಧರಿಸಲಾಗಿದ್ದು, ಈ ವಿಷಯವನ್ನು ಮನಮೋಹನ್ ಸಿಂಗ್ ಅವರ ಕುಟುಂಬಕ್ಕೆ ತಿಳಿಸಲಾಗಿದೆ ಎಂದು ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ ದೆಹಲಿಯಲ್ಲಿಂದು ಹೇಳಿದ್ದಾರೆ.

<><*<><>*><>

ಇದೇ ೩೧ ರಿಂದ ಜನವರಿ ೧೩ರವರೆಗೆ ನೇಪಾಳದ ಸಲ್ಝಾಂಡಿಯಲ್ಲಿ ನಡೆಯಲಿರುವ ೧೮ ನೇ ಆವೃತ್ತಿಯ ಬೆಟಾಲಿಯನ್ ಮಟ್ಟದ ಜಂಟಿ ಸೇನಾ ಸಮರಾಭ್ಯಾಸ ಸೂರ್ಯ ಕಿರಣ್‌ನಲ್ಲಿ ಭಾಗವಹಿಸಲು ೩೩೪ ಸಿಬ್ಬಂದಿ ಒಳಗೊಂಡ ಭಾರತೀಯ ಸೇನಾ ತುಕಡಿ ಇಂದು ನೇಪಾಳಕ್ಕೆ ಹೊರಟಿದೆ. ಈ ಜಂಟಿ ಸಮರಾಭ್ಯಾಸ ಪರ್ವತಗಳಲ್ಲಿ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳು ಮತ್ತು ವಿಶ್ವಸಂಸ್ಥೆಯ ಅಧಿನಿಯಮದಡಿಯಲ್ಲಿ ಮಾನವೀಯ ನೆರವು ಮತ್ತು ವಿಪತ್ತು ಪರಿಹಾರದಲ್ಲಿ ಪರಸ್ಪರ ಕಾರ್ಯಾಚರಣೆಯ ಸನ್ನದ್ಧತೆ, ವಾಯುಯಾನ ಅಂಶಗಳು, ವೈದ್ಯಕೀಯ ತರಬೇತಿ ಮತ್ತು ಪರಿಸರ ಸಂರಕ್ಷಣೆಯನ್ನು ಹೆಚ್ಚಿಸುವತ್ತ ಗಮನ ಹರಿಸಲಾಗುವುದು ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ಸಮರಾಭ್ಯಾಸ, ಭಾರತ ಮತ್ತು ನೇಪಾಳದ ನಡುವಣ ಸಾಂಸ್ಕೃತಿಕ ಹಾಗೂ ಮಿಲಿಟರಿ ಸಂಬಧಗಳನ್ನು ಮತ್ತಷ್ಟು ಬಲಪಡಿಸಲು ಸಹಕಾರಿಯಾಗಲಿದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ದೇಶವಾಸಿಗಳನ್ನು ಉದ್ದೇಶಿಸಿ ತಮ್ಮ ಮನದಾಳದ ಅಭಿಪ್ರಾಯ ಹಂಚಿಕೊಳ್ಳಲಿದ್ದಾರೆ. ಬೆಳಗ್ಗೆ ೧೧ ಗಂಟೆಗೆ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಇದು 'ಮನ್ ಕಿ ಬಾತ್'ನ ೧೧೭ನೇ ಅವತರಣಿಕೆಯಾಗಿದೆ. ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳಲ್ಲಿ, ಆಕಾಶವಾಣಿ ಸುದ್ದಿ ಜಾಲತಾಣ, ಮೊಬೈಲ್ ಆಪ್ ಹಾಗೂ ಯೂಟ್ಯೂಬ್ ಚಾನಲ್‌ಗಳಲ್ಲೂ ಈ ಕಾರ್ಯಕ್ರಮ ಬಿತ್ತರವಾಗಲಿದೆ. ಪ್ರಧಾನಿ ಕಾರ್ಯಾಲಯ ಹಾಗೂ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವಾಲಯದ ಜಾಲತಾಣಗಳಲ್ಲೂ ಈ ಕಾರ್ಯಕ್ರಮ ಪ್ರಸಾರವಾಗಲಿದ್ದು, ಹಿಂದಿ ಅವತರಣಿಕೆ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಈ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ಕ್ಯಾಬ್ ಅಗ್ರಿಗೇಟರ್‌ಗಳ ದರ ವ್ಯತ್ಯಾಸ ಆರೋಪಗಳ ಬಗ್ಗೆ ತನಿಖೆ ನಡೆಸುವಂತೆ ಕೇಂದ್ರ ಗ್ರಾಹಕ ರಕ್ಷಣಾ ಪ್ರಾಧಿಕಾರ-ಸಿಸಿಪಿಎ ಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ನಿರ್ದೇಶಿಸಿದ್ದಾರೆ. **Android** ಮತ್ತು **Apple** ಸಾಧನಗಳಲ್ಲಿ ಒಂದೇ ರೈಡ್‌ಗಳಿಗೆ ವಿಭಿನ್ನ ದರಗಳನ್ನು ವಿಧಿಸಲಾಗುತ್ತಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ವಿವರ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಸಾಮಾಜಿಕ ಜಾಲತಾಣದ ಮೂಲಕ ಸಚಿವರು ಸೂಚಿಸಿದ್ದಾರೆ. ಇತರ ಕ್ಷೇತ್ರಗಳ ಜೊತೆಗೆ ಆಹಾರ ವಿತರಣಾ ಅಪ್ಲಿಕೇಶನ್‌ಗಳು, ಆನ್‌ಲೈನ್ ಟಿಕೆಟ್ ಬುಕಿಂಗ್ ಅಪ್ಲಿಕೇಶನ್‌ಗಳಂತಹ ಇತರ ಕ್ಷೇತ್ರಗಳನ್ನು ಪರಿಶೀಲಿಸಿ ಗ್ರಾಹಕರ ಶೋಷಣೆಗೆ ಅವಕಾಶವಿಲ್ಲದಂತೆ ವ್ಯವಸ್ಥೆ ಬಲಪಡಿಸಲು ಕ್ರಮಕೈಗೊಳ್ಳಬೇಕು ಎಂದು ಸಚಿವರು ಹೇಳಿದ್ದಾರೆ.

<><*<><>*><>

ಸಂಪರ್ಕ ಇಲಾಖೆಯ ಕಾರ್ಯ ಚಟುವಟಿಕೆಗಳನ್ನು ಡಿಜಿಟಲೀಕರಣ ಮಾಡುವ ಗುರಿ ಹೊಂದಲಾಗಿದೆ ಎಂದು ಕೇಂದ್ರ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನಿನ್ನೆ ನವದೆಹಲಿಯಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಈ ಸಂಬಂಧ ಉನ್ನತ ಮಟ್ಟದ ಸಭೆ ನಡೆಸಿದ್ದಾರೆ. ಲಾಭದಾಯಕ ಲಾಜಿಸ್ಟಿಕ್ಸ್ ಕಂಪನಿಯನ್ನಾಗಿ ಮಾಡುವ ಹಾಗೂ ಸಚಿವಾಲಯದ ಬಂಡವಾಳ ವೆಚ್ಚದ ಬೇಡಿಕೆಗಳನ್ನು ಅವರು ಇದೇ ಸಂದರ್ಭದಲ್ಲಿ ಹಣಕಾಸು ಸಚಿವರ ಮುಂದೆ ಮಂಡಿಸಿದ್ದಾರೆ. ಮುಂದಿನ ೫ ರಿಂದ ೭ ವರ್ಷಗಳಲ್ಲಿ ತನ್ನ ಹೆಚ್ಚಿನ ಉತ್ಪನ್ನಗಳಿಗೆ ಮಾರುಕಟ್ಟೆ ಪಾಲು, ಆದಾಯ ಹಾಗೂ ಉದ್ಯಮದ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಇಂಡಿಯಾ ಪೋಸ್ಟ್ ಹೊಂದಿದೆ ಎಂದು ಸಚಿವರು ಹೇಳಿದ್ದಾರೆ.

<><*<><>*><>

ಆರು ದಿನಗಳ ಅಮೆರಿಕಾ ಪ್ರವಾಸದಲ್ಲಿರುವ ಕೇಂದ್ರ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಇಂದು ನಿಯೋಜಿತ ರಾಷ್ಟ್ರೀಯ ಭದ್ರತಾ ಸಲಹೆಗಾರ ಮೈಕಲ್ ವಾಲ್ಟ್ಜ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಸಭೆಯಲ್ಲಿ ದ್ವಿಪಕ್ಷೀಯ ಪಾಲುದಾರಿಕೆ ಹಾಗೂ ಜಾಗತಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬಗ್ಗೆ ಸಮಾಲೋಚನೆ ನಡೆಸಲಾಯಿತು ಎಂದು ತಿಳಿಸಿದ್ದಾರೆ.

<><*<><>*><>

ಚೆನ್ನೈನ ಅಣ್ಣಾ ವಿಶ್ವವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಲೈಂಗಿಕ ದೌರ್ಜನ್ಯ ಪ್ರಕರಣದ ತನಿಖೆಗಾಗಿ ಸತ್ಯಶೋಧನಾ ಸಮಿತಿ ರಚಿಸಲಾಗಿದೆ ಎಂದು ರಾಷ್ಟ್ರೀಯ ಮಹಿಳಾ ಆಯೋಗದ ಅಧ್ಯಕ್ಷೆ ವಿಜಯ ರಹತ್ಕರ್ ತಿಳಿಸಿದ್ದಾರೆ. ಇಬ್ಬರು ಸದಸ್ಯರ ಸಮಿತಿ, ಘಟನೆಗೆ ಕಾರಣವಾದ ಸಂದರ್ಭವನ್ನು ಹಾಗೂ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಮೌಲ್ಯಮಾಪನ ಮಾಡಲಿದೆ. ಸಮಿತಿ, ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯೆ ಮಮತಾ ಕುಮಾರಿ ಮತ್ತು ಮಹಾರಾಷ್ಟ್ರದ ನಿವೃತ್ತ ಪೊಲೀಸ್ ಮಹಾ ನಿರ್ದೇಶಕ ಪ್ರವೀಣ್ ದೀಕ್ಷಿತ್ ಅವರನ್ನು ಒಳಗೊಂಡಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ - ಇಸ್ರೋ ತನ್ನ ಬಾಹ್ಯಾಕಾಶ ಡಾಕಿಂಗ್ ಪ್ರಯೋಗ, ಸ್ಪೇಡೆಕ್ಸ್ ಗೆ ಸೋಮವಾರ ಚಾಲನೆ ನೀಡಲು ಸಜ್ಜಾಗಿದೆ. ಈ ಕುರಿತು ಸಂದರ್ಶನವೊಂದರಲ್ಲಿಂದು ಮಾತನಾಡಿದ ಬಾಹ್ಯಾಕಾಶ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್, ಇಸ್ರೋದ ಈ ಐತಿಹಾಸಿಕ ಯೋಜನೆ, ಬಾಹ್ಯಾಕಾಶದಲ್ಲಿ ಎರಡು ಉಪಗ್ರಹಗಳನ್ನು ಡಾಕಿಂಗ್ ಅಥವಾ ವಿಲೀನಗೊಳಿಸುವ ಅಪರೂಪದ ಸಾಧನೆ ಮಾಡುವ ಗುರಿ ಹೊಂದಿದೆ. ಸ್ಪೇಡೆಕ್ಸ್ ಯೋಜನೆ, ಬಾಹ್ಯಾಕಾಶ ಡಾಕಿಂಗ್ ಅನ್ನು ಕರಗತ ಮಾಡಿಕೊಳ್ಳುವ ಸಾಮರ್ಥ್ಯ ಹೊಂದಿರುವ ರಾಷ್ಟ್ರಗಳ ಪಟ್ಟಿಗೆ ಭಾರತದ ಹೆಸರನ್ನು ಸೇರಿಸಲಿದೆ. ಪಿಎಸ್ಎಲ್‌ವಿ ರಾಕೆಟ್ ವಿಶಿಷ್ಟ ವಿಧಾನದೊಂದಿಗೆ ಸ್ಥಳೀಯ ತಂತ್ರಜ್ಞಾನವಾದ 'ಭಾರತೀಯ ಡಾಕಿಂಗ್ ಸಿಸ್ಟಮ್ ಹೊಂದಿರುವ ಎರಡು ಉಪಗ್ರಹಗಳನ್ನು ಉಡಾವಣೆ ಮಾಡಲಿದೆ ಎಂದು ಜಿತೇಂದ್ರ ಸಿಂಗ್ ಹೇಳಿದರು.

<><*<><>*><>

ಮುಂದಿನ ೧೦ ರಿಂದ ೧೬ರವರೆಗೆ ಮುಂಬೈ ಮತ್ತು ಥಾಣೆಯಲ್ಲಿ ೨೧ನೇ ಥರ್ಡ್ ಐ ಏಷ್ಯನ್ ಫಿಲ್ಮ್ ಫೆಸ್ಟಿವಲ್ ನಡೆಯಲಿದೆ. ಉತ್ಸವಕ್ಕಾಗಿ ಒಟ್ಟು ೬೧ ಚಲನಚಿತ್ರಗಳನ್ನು ಆಯ್ಕೆ ಮಾಡಲಾಗಿದೆ. ಈ ಚಲನಚಿತ್ರಗಳನ್ನು ಅಂಧೇರಿ, ಸಿಯಾನ್ ಮತ್ತು ಥಾಣೆಯಲ್ಲಿರುವ ಮೂವಿಮ್ಯಾಕ್ಸ್ ಚಿತ್ರಮಂದಿರಗಳಲ್ಲಿ ಪ್ರದರ್ಶಿಸಲಾಗುತ್ತದೆ. ಈ ವರ್ಷ, ಉತ್ಸವವು ಹೆಸರಾಂತ ಚಿತ್ರಕಥೆಗಾರ ಮತ್ತು ಗೀತರಚನೆಕಾರ ಜಾವೇದ್ ಅಖ್ತರ್ ಅವರಿಗೆ 'ಏಷ್ಯನ್ ಫಿಲ್ಮ್ ಕಲ್ಚರ್ ಪ್ರಶಸ್ತಿ' ಅನ್ನು ನೀಡಿ ಗೌರವಿಸಲಾಗುತ್ತದೆ ಹಾಗೂ ಪತ್ರಕರ್ತ ರಫೀಕ್ ಬಾಗ್ದಾದಿ ಅವರು 'ಸತ್ಯಜಿತ್ ರೇ ಸ್ಮಾರಕ ಪ್ರಶಸ್ತಿ ಸ್ವೀಕರಿಸಲಿದ್ದಾರೆ.

<><*<><>*><>

ಆಸ್ಟ್ರೇಲಿಯಾದ ಮೆಲ್ಬರ್ನ್‌ನಲ್ಲಿ ನಡೆದ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ಸರಣಿಯ ೪ನೇ ಪಂದ್ಯದ ೩ನೇ ದಿನದ ಅಂತ್ಯಕ್ಕೆ ಭಾರತ ೯ ವಿಕೆಟ್ ನಷ್ಟಕ್ಕೆ ೩೫೮ ರನ್ ಮಾಡಿದೆ. ಮಳೆಯಿಂದಾಗಿ ಪಂದ್ಯಕ್ಕೆ ಕೆಲಕಾಲ ಅಡ್ಡಿ ಉಂಟಾಗಿತ್ತು. ಯುವ ಬ್ಯಾಟ್ಸ್‌ಮನ್ ನಿತೀಶ್ ಕುಮಾರ್ ರೆಡ್ಡಿ ಶತಕ ಬಾರಿಸಿದ್ದಾರೆ. ಇದು ಟೆಸ್ಟ್‌ನಲ್ಲಿ ಅವರ ಚೊಚ್ಚಲ ಶತಕವಾಗಿದೆ. ಸಂಕಷ್ಟಕ್ಕೆ ಸಿಲುಕಿದ್ದ ಭಾರತ ತಂಡವನ್ನು ನಿತೀಶ್ ಕುಮಾರ್ ರೆಡ್ಡಿ ಹಾಗು ವಾಷಿಂಗ್ಟನ್ ಸುಂದರ್ ಜೋಡಿ ಮೇಲೆತ್ತುವ ಮೂಲಕ ಫಾಲೋಆನ್ ಭೀತಿಯಿಂದ ಪಾರು ಮಾಡಿದ್ದಾರೆ. ಎರಡನೇ ದಿನದ ಆಟದ ಅಂತ್ಯಕ್ಕೆ ಭಾರತ ೫ ವಿಕೆಟ್ ೧೬೪ ರನ್ ಗಳಿಸಿತ್ತು. ಸದ್ಯ ಭಾರತ, ೧೧೬ ರನ್ ಗಳ ಹಿನ್ನಡೆಯಲ್ಲಿದೆ. ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ, ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೪೭೪ ರನ್ ಗಳಿಸಿತ್ತು.

<><*<><>*><>

೨೦೨೪-೨೫ರ ಹಾಕಿ ಇಂಡಿಯಾ ಲೀಗ್ ಪಂದ್ಯಾವಳಿಯು ಒಡಿಶಾದ ರೂರ್ಕೆಲಾದಲ್ಲಿ ಇಂದು ಆರಂಭವಾಗಲಿದೆ. ಬಿರ್ಸಾ ಮುಂಡಾ ಕ್ರೀಡಾಂಗಣದಲ್ಲಿ ನಡೆಯುವ ಆರಂಭಿಕ ಪಂದ್ಯದಲ್ಲಿ ಡೆಲ್ಲಿ ಎಸ್.ಜಿ. ಪೈಪರ್ಸ್ ತಂಡ ಗೋನಾಸಿಕಾ ತಂಡವನ್ನು ಎದುರಿಸಲಿವೆ. ಪಂದ್ಯ ರಾತ್ರಿ ೮.೧೫ಕ್ಕೆ ಆರಂಭವಾಗಲಿದೆ. ಪುರುಷರ ಲೀಗ್ ಪಂದ್ಯಗಳು ಎರಡು ಹಂತಗಳಲ್ಲಿ ನಡೆಯಲಿವೆ. ಮೊದಲ ಹಂತ ಇಂದಿನಿಂದ ಬರುವ ಜನವರಿ ೧೮ರ ವರೆಗೆ ನಡೆಯಲಿದೆ. ಎರಡನೇ ಹಂತದ ಪಂದ್ಯಗಳು ಜನವರಿ ೧೯ ರಂದು ಪ್ರಾರಂಭವಾಗಲಿದ್ದು, ಅಲ್ಲಿ ತಂಡಗಳನ್ನು ಎರಡು ಪೂಲ್‌ಗಳಾಗಿ ವಿಂಗಡಿಸಲಾಗುತ್ತದೆ. ಈ ಹಂತದಿಂದ ಅಗ್ರ ನಾಲ್ಕು ತಂಡಗಳು ಸೆಮಿಫೈನಲ್‌ಗೆ ಮುನ್ನಡೆಯಲಿವೆ. ನಾಲ್ಕು ಪಂದ್ಯಗಳು ರಾಂಚಿಯಲ್ಲಿ ನಡೆದರೆ, ಉಳಿದ ಇತರೆ ಪಂದ್ಯಗಳು ರೂರ್ಕೆಲಾದಲ್ಲಿ ನಡೆಯಲಿವೆ. ಲೀಗ್‌ನ ಫೈನಲ್ ಪಂದ್ಯ ಫೆಬ್ರುವರಿ ೧ ರಂದು ನಡೆಯಲಿದೆ.

<><*<><>*><>

ಕಾರ್ಗಿಲ್‌ನಲ್ಲಿ ಭಾರೀ ಹಿಮಪಾತದಿಂದಾಗಿ ಎರಡು ಹೆದ್ದಾರಿಗಳ ಸಂಪರ್ಕ ಕಡಿದು ಹೋಗಿದ್ದು, ಸಂಚಾರಕ್ಕೆ ಅಡ್ಡಿ ಉಂಟಾಗಿದೆ. ಕಾರ್ಗಿಲ್ ಅನ್ನು ಶ್ರೀನಗರ ಹಾಗೂ ಝನ್ಸ್‌ಕರ್‌ನೊಂದಿಗೆ ಸಂಪರ್ಕಿಸುವ ಎರಡು ರಾಷ್ಟ್ರೀಯ ಹೆದ್ದಾರಿಗಳು ಹಿಮದಿಂದ ಮುಚ್ಚಿ ಹೋಗಿವೆ.

<><*<><>*><>

ಅಫ್ಘಾನಿಸ್ತಾನ-ಪಾಕಿಸ್ತಾನ ಗಡಿಯಲ್ಲಿಂದು ಉಭಯ ರಾಷ್ಟ್ರಗಳ ಗಡಿ ಭದ್ರತಾ ಪಡೆಗಳ ನಡುವೆ ನಡೆದ ತೀವ್ರ ಘರ್ಷಣೆಯಲ್ಲಿ ಕನಿಷ್ಠ ೧೯ ಪಾಕಿಸ್ತಾನಿ ಸೈನಿಕರು ಹಾಗೂ ಮೂವರು ಅಫ್ಘಾನಿಸ್ತಾನದ ಪ್ರಜೆಗಳು ಹತರಾಗಿರುವ ಕುರಿತು ವರದಿಯಾಗಿದೆ.